ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ಶೈವಿ/33/ಇತರೆ/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಶೇಷಾದ್ರಿ ರಸ್ತೆ, ಬೆಂಗಳೂರು -560001.
ದಿನಾಂಕ : 10.06.2022.

**ಅಧಿಕೃತ ಜ್ಞಾಪನ**

ವಿಷಯ : ದಿನಾಂಕ : 21.06.2022ರಂದು ನಡೆಯಲಿರುವ 'ಅಂತರರಾಷ್ಟ್ರೀಯ ಯೋಗ ದಿನಾಚರಣೆ'ಯಲ್ಲಿ ಕಾಲೇಜುಗಳ ಎನ್.ಎಸ್.ಎಸ್/ಎನ್.ಸಿ.ಸಿ ವಿದ್ಯಾರ್ಥಿಗಳನ್ನು ನಿಯೋಜಿಸುವ ಬಗ್ಗೆ.

********

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ, ದಿನಾಂಕ : 21.06.2022ರಂದು ಸನ್ಮಾನ್ಯ ಪ್ರಧಾನ ಮಂತ್ರಿಗಳಾದ ಶ್ರೀ ನರೇಂದ್ರ ಮೋದಿಯವರ ಉಪಸ್ಥಿತಿಯಲ್ಲಿ ಮೈಸೂರಿನಲ್ಲಿ ನಡೆಯಲಿರುವ ಅಂತರರಾಷ್ಟ್ರೀಯ ಯೋಗ ದಿನಾಚರಣೆಯ ಅಂಗವಾಗಿ 12.06.2022 ಹಾಗೂ 19.06.2022 ರಂದು ಬೆಳಗ್ಗೆ 6.00 ಘಂಟೆಗೆ ಹಾಗೂ ಇತರೆ ದಿನಗಳಂದು ಯೋಗ ಪೂರ್ವಭ್ಯಾಸವನ್ನು ಮೈಸೂರಿನ ಅರಮನೆ ಆವರಣದಲ್ಲಿ ಆಯೋಜಿಸಲಾಗಿದ್ದು ಸದರಿ ಕಾರ್ಯಕ್ರಮಕ್ಕೆ ಮೈಸೂರು ನಗರ ಹಾಗೂ ಸುತ್ತಮುತ್ತಲಿನ ಜಿಲ್ಲೆಗಳ ವ್ಯಾಪ್ತಿಗೊಳಪಡುವ ಕಾಲೇಜು ಶಿಕ್ಷಣ ಇಲಾಖೆಯ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಎಲ್ಲಾ ವಿದ್ಯಾರ್ಥಿಗಳನ್ನು, ಎನ್.ಎಸ್.ಎಸ್ ಹಾಗೂ ಸ್ಕೌಟ್ಸ್ ಮತ್ತು ಗೈಡ್ಸ್ ಸ್ವಯಂ ಸೇವಕ/ಸೇವಕಿಯರು, ಎನ್.ಸಿ.ಸಿ ಕೆಡೆಟ್‌ಗಳು ಹಾಗೂ ಅಧ್ಯಾಪಕರುಗಳನ್ನು ನಿಯೋಜಿಸಿ ಅಂತರರಾಷ್ಟ್ರೀಯ ಯೋಗ ದಿನದ ಯಶಸ್ವಿ ಕಾರ್ಯಾಚರಣೆಗೆ ಸೂಕ್ತ ಕ್ರಮವಹಿಸುವಂತೆ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ. ಮುಂದುವರೆದು, ಈ ನಿಟ್ಟಿನಲ್ಲಿ ಜಿಲ್ಲಾಡಳಿತ ಹಾಗೂ ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮೈಸೂರು ಇವರು ನೀಡುವ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈ ಮೂಲಕ ತಿಳಿಸಲಾಗಿದೆ.

**(ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ)**

**ಕಾಲೇಜು ಶಿಕ್ಷಣ ಜಂಟಿ ನಿರ್ದೇಶಕರು**

<u>ಇವರಿಗೆ :</u>

1) ಮೈಸೂರು ನಗರದಲ್ಲಿರುವ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಗೊಳಪಡುವ ಸರ್ಕಾರಿ ಹಾಗೂ ಖಾಸಗಿ ಅನುದಾನಿತ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸೂಕ್ತ ಕ್ರಮಕ್ಕಾಗಿ.

<u>ಪ್ರತಿಯನ್ನು :</u>

1) ಪ್ರಾದೇಶಿಕ ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ಇಲಾಖೆ, ಮೈಸೂರು. ಇವರಿಗೆ ಮಾಹಿತಿಗಾಗಿ ಹಾಗೂ ತಮ್ಮ ನಗರ ವ್ಯಾಪ್ತಿಯ ಪದವಿ ಕಾಲೇಜುಗಳ ಪ್ರಾಂಶುಪಾಲರುಗಳಿಗೆ (ಅಗತ್ಯ ಕ್ರಮವಹಿಸುವಂತೆ ಸೂಚಿಸಲು).
2) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಬೆಂಗಳೂರು- ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
3) ಕಛೇರಿ ಪ್ರತಿ.

Scanned with CamScanner